15 ಆ6ಜ್ಞ
ನಿ=72 = (97)
4RK
2411

# ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಮಧು ಜಿ. ಮಾದೇಗೌಡ ಇವರು ನಿಯಮ-72 ರ ಮೇರೆಗೆ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

ವಿಷಯ: ಸ್ವಚ್ಛ ಭಾರತ ಮಿಷನ್ (ಗ್ರಾಮೀಣ) ಯೋಜನೆಯಡಿ ಮನೆ ಮನೆಯಿಂದ ಘನ ತ್ಯಾಜ್ಯ ಸಂಗ್ರಹಿಸಲು ವಾಹನಗಳು (ಸ್ವಚ್ಛತಾ ವಾಹಿನಿಗಳು) ಲಭ್ಯವಿದ್ದರೂ ಬಳಕೆ ಆಗುತ್ತಿಲ್ಲ. ಬಹುತೇಕ 'ಸ್ವಚ್ಛ ವಾಹಿನಿ'ಗಳಿಗೆ ವಿಮೆ ಕೂಡ ಇಲ್ಲ. SBM(G) ಮತ್ತು NRLM ಒಗ್ಗೂಡಿಸುವಿಕೆಯಿಂದ ಘನ ತ್ಯಾಜ್ಯ ನಿರ್ವಹಣಾ ಘಟಕಗಳನ್ನು (ಸ್ವಚ್ಛ ಸಂಕೀರ್ಣ ಘಟಕಗಳು) ಕಾರ್ಯಾಚರಣೆಗೊಳಿಸಲು ಬಹುತೇಕ ಕಡೆ ಇದುವರೆವಿಗೂ ಸಾಧ್ಯವಾಗಿಲ್ಲ. 'ಸ್ವಚ್ಛ ವಾಹಿನಿ' ವಾಹನಗಳನ್ನು ಚಾಲನೆ ಮಾಡಲು ಮಹಿಳೆಯರಿಗೆ ಚಾಲನಾ ತರಬೇತಿ ನೀಡಲಾಗಿದ್ದರೂ ಸಹ ಸಮರ್ಪಕ ಸೇವೆ ಪಡೆಯುವಲ್ಲಿ ಗ್ರಾಮ ಪಂಚಾಯಿತಿಗಳು ವಿಫಲವಾಗಿದೆ. ತರಬೇತಿ ಪೂರ್ಣಗೊಳಿಸಿದ ಬಹುತೇಕರಿಗೆ ಇನ್ನೂ ವಾಹನ ಚಾಲನಾ ಪರವಾನಗಿ (DL) ಸಿಕ್ಕಿಲ್ಲ. ಕೆಲವು ಜಿಲ್ಲೆಗಳಲ್ಲಿ ಮಹಿಳಾ ಚಾಲಕಿಯರಿಗೆ ಮಾಸಿಕ ಗೌರವ ಸಂಭಾವನೆ ನೀಡದೆ ಬಾಕಿ ಉಳಿಸಿಕೊಳ್ಳಲಾಗಿದೆ. ಬಹುತೇಕ ಗ್ರಾಮ ಪಂಚಾಯಿತಿಗಳು ಮಹಿಳಾ ಒಕ್ಕೂಟದೊಂದಿಗೆ MoU ಮಾಡಿಕೊಳ್ಳುವುದಕಷ್ಟೇ ತಮ್ಮನ್ನು ಸೀಮಿತಗೊಳಿಸಿಕೊಂಡಿವೆ.

ಹೀಗಾಗಿ, ಗ್ರಾಮ ಸ್ವಚ್ಛತೆ, ನೈರ್ಮಲ್ಯ ಎಂಬುವುದು ಗ್ರಾಮೀಣ ಭಾಗದಲ್ಲಿ ಮರೀಚಿಕೆ ಆಗಿದೆ. ಯೋಜನೆ ಅನುಷ್ಠಾನಕ್ಕೆ ನೂರಾರು ಕೋಟಿ ರೂಪಾಯಿಗಳನ್ನು ಬಳಸಿದ್ದರೂ ವಾಸ್ತವವಾಗಿ ಅದರ ಲಾಭ ಜನರಿಗೆ ಸಿಗುತ್ತಿಲ್ಲ. ಹಾಗಾಗಿ, ಈ ಕುರಿತ ಗಂಭೀರ ಸಮಸ್ಯೆಯ ಬಗ್ಗೆ.

**ಉತ್ತರ:**

1. ರಾಜ್ಯದಲ್ಲಿ ಘನ ತ್ಯಾಜ್ಯ ನಿರ್ವಹಣೆಗಾಗಿ ಬಳಸಲಾಗುತ್ತಿರುವ ಒಟ್ಟು 5037 ವಾಹನಗಳಿಗೆ (ಸ್ವಚ್ಛ ವಾಹಿನಿ) ವಿಮೆ ಮಾಡಿಸಲಾಗಿದ್ದು, ಎಲ್ಲಾ ವಾಹನಗಳನ್ನು ಘನ ತ್ಯಾಜ್ಯ ವಿಲೇವಾರಿಗೆ ಬಳಕೆ ಮಾಡಲಾಗುತ್ತಿದೆ. ಘನ ತ್ಯಾಜ್ಯ ನಿರ್ವಹಣೆಗಾಗಿ ವಾಹನ ಚಾಲನೆ ತರಬೇತಿ ಪಡೆದ 5905 GPLF ಮಹಿಳೆಯರಲ್ಲಿ 4565 ವಾಹನ ಚಾಲಕಿಯರ ಚಾಲನಾ ಪರವಾನಗಿ ಮಾಡಿಸಲಾಗಿದ್ದು, 3961 ಮಹಿಳೆಯರು ವಾಹನವನ್ನು ಚಾಲನೆ ಮಾಡುತ್ತಿದ್ದಾರೆ. ಚಾಲನಾ ಪರವಾನಗಿ ಇಲ್ಲದಿದ್ದಲ್ಲಿ ಪರವಾನಗಿ ಮಾಡಿಸಲು ಕ್ರಮ ವಹಿಸಲಾಗಿದೆ.

2. ಸ್ವಚ್ಛಭಾರತ್ ಮಿಷನ್ (ಗ್ರಾ) ಯೋಜನೆಯ ಮಾರ್ಗಸೂಚಿಯಂತೆ ಎಲ್ಲಾ 5949 ಗ್ರಾಮ ಪಂಚಾಯಿತಿಯ ಗ್ರಾಮಗಳಲ್ಲಿ ಘನತ್ಯಾಜ್ಯ ನಿರ್ವಹಣೆ ಮಾಡಲು ಕಾರ್ಯಕ್ರಮ ರೂಪಿಸಿಲಾಗಿದೆ. 4375 ಗ್ರಾಮ ಪಂಚಾಯಿತಿಗಳಲ್ಲಿ ಪ್ರತ್ಯೇಕವಾಗಿ ಹಾಗೂ 1574 ಗ್ರಾಮ ಪಂಚಾಯಿತಿಗಳಲ್ಲಿ ಕ್ಲಸ್ಟರ್ ಮಾದರಿಯಲ್ಲಿ ಘನ ತ್ಯಾಜ್ಯ ನಿರ್ವಹಣಾ ಘಟಕಗಳನ್ನು ನಿರ್ಮಿಸಿ, ಘನ ತ್ಯಾಜ್ಯ ಸಂಗ್ರಹಣೆ ನಿರ್ವಹಣೆ ಹಾಗೂ ವಿಲೇವಾರಿಯನ್ನು ಮಾಡಲಾಗುತ್ತಿದೆ. ಗ್ರಾಮ ಪಂಚಾಯತಿಗಳಲ್ಲಿ, ಸಂಜೀವಿನಿ ಗ್ರಾಮ ಪಂಚಾಯತಿ ಮಟ್ಟದ ಒಕ್ಕೂಟ (ಜಿಪಿಎಲ್ಎಫ್-GPLF) ಮಹಿಳಾ ಸ್ವಸಹಾಯ ಸಂಘಗಳ ಮೂಲಕ ಘನ ತ್ಯಾಜ್ಯಗಳನ್ನು ಸಂಗ್ರಹಿಸಿ ಸಮರ್ಪಕವಾಗಿ ವಿಲೇವಾರಿ ಮಾಡಲಾಗುತ್ತಿದೆ.

3. ಘನ ತ್ಯಾಜ್ಯ ನಿರ್ವಹಣೆಗಾಗಿ (SLWM) ಪ್ರಾರಂಭಿಕ ಹಂತದಿಂದ ಕೊನೆಯವರೆಗೆ ಕಾರ್ಯನಿರ್ವಹಿಸಲು ರಾಷ್ಟ್ರೀಯ ಜೀವನೋಪಾಯ ಅಭಿಯಾನ (NLM) ದಡಿ ಸಂಘಟಿಸಲಾದ ಗ್ರಾಮ ಪಂಚಾಯಿತಿ ಮಟ್ಟದ ಒಕ್ಕೂಟ (GPLF) ಗಳು/ಸ್ಥಳೀಯ ಮಹಿಳಾ ಸ್ವ-ಸಹಾಯ ಸಂಘಗಳನ್ನು ಗುರುತಿಸಿ ಅವುಗಳ ಮೂಲಕ ಇವರ ಸೇವೆಯನ್ನು ಪಡೆಯಲಾಗುತ್ತಿದೆ.

4. ಗ್ರಾಮ ಪಂಚಾಯಿತಿಗಳಲ್ಲಿ, ಸಂಜೀವಿನಿ ಗ್ರಾಮ ಪಂಚಾಯಿತಿ ಮಟ್ಟದ ಒಕ್ಕೂಟ (ಜಿಪಿಎಲ್ಎಫ್) ಮಹಿಳಾ ಸ್ವಸಹಾಯ ಸಂಘಗಳು ಘನತ್ಯಾಜ್ಯ ನಿರ್ವಹಣೆಯಲ್ಲಿ ತೊಡಗಿಸಿಕೊಂಡಿರುವ ಮಹಿಳೆಯರಿಗೆ ಪ್ರತಿ ತಿಂಗಳು ಗೌರವ ಸಂಭಾವನೆಯನ್ನು ನೀಡಲಾಗುತ್ತಿದ್ದು, ಕೆಲವು ಗ್ರಾಮ ಪಂಚಾಯಿತಿಗಳಲ್ಲಿ ಗೌರವ ಸಂಭಾವನೆ ನೀಡಲು ಬಾಕಿ ಇದ್ದು ಗೌರವ ಸಂಭಾವನೆಯನ್ನು ಪಾವತಿಸಲು ಕ್ರಮ ವಹಿಸಲು ಸಂಜೀವಿನಿ ಗ್ರಾಮ ಪಂಚಾಯಿತಿ ಮಟ್ಟದ ಒಕ್ಕೂಟಗಳಿಗೆ ಸೂಚಿಸಲಾಗಿರುತ್ತದೆ (GPLF).

5. ಗ್ರಾಮ ಪಂಚಾಯಿತಿ ಮತ್ತು ಗ್ರಾಮ ಪಂಚಾಯಿತಿ ಮಟ್ಟದ ಒಕ್ಕೂಟದೊಂದಿಗೆ ಒಪ್ಪಂದ ಮಾಡಿಕೊಂಡು ಒಪ್ಪಂದ ಮಾಡಿಕೊಳ್ಳಲಾದ ಪ್ರತಿಯೊಂದು ಒಕ್ಕೂಟದ ಮಹಿಳಾ ಸ್ವ-ಸಹಾಯ ಸಂಘಗಳ ಮೂಲಕ ಘನ ತ್ಯಾಜ್ಯ ನಿರ್ವಹಣೆಯನ್ನು ಕೈಗೊಳ್ಳಲಾಗುತ್ತಿದೆ.

6. ಘನ ತ್ಯಾಜ್ಯ ನಿರ್ವಹಣೆಯನ್ನು ಸಮರ್ಪಕವಾಗಿ ನಿರ್ವಹಿಸಲು ಸರ್ಕಾರದಿಂದ ವಿಸ್ತೃತವಾದ ಸುತ್ತೋಲೆಗಳನ್ನು ಹೊರಡಿಸಲಾಗಿದೆ. ಸುತ್ತೋಲೆ ಪ್ರತಿಯನ್ನು ಅನುಬಂಧದಲ್ಲಿ ನೀಡಿದೆ.

ಸಂಖ್ಯೆ:RDPR 665 GPA 2025

**(ಪ್ರಿಯಾಂಕ್ ಖರ್ಗೆ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.